ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಬೀದರ್ ಜಿಲ್ಲೆಯಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) -

04 (55) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೀದರ್ ಜಿಲ್ಲೆಯಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಅನುದಾನದಿಂದ ಕಾಮಗಾರಿಗಳು ಯಾವ ಹಂತದಲ್ಲಿದೆ; ಅವುಗಳಿಗೆ ಖರ್ಚು ಮಾಡಿರುವ ಅನುದಾನ ಎಷ್ಟು; ಕಾಮಗಾರಿಗಳು ಯಾವಾಗ ಪೂರ್ಣಗೊಳ್ಳುತ್ತದೆ;

(ಆ) 2018-19, 2019-20ರಲ್ಲಿ ಬೀದರ್ ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ `ನಮ್ಮ ಗ್ರಾಮ ನಮ್ಮ ರಸ್ತೆ' ಯೋಜನೆಯಡಿಯಲ್ಲಿ ಮಂಜೂರಾದ ಅನುದಾನ ಎಷ್ಟು; ಖರ್ಚು ಆದ ಅನುದಾನ ಎಷ್ಟು; ಪ್ರಗತಿ ಹಂತದಲ್ಲಿರುವ ಕಾಮಗಾರಿಗಳು ಯಾವುವು;

(ಇ) ಈ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣ ನೀರು ಸರಬರಾಜು ಯೋಜನೆಯಡಿಯಲ್ಲಿ 2018-19, 2019-20ರಲ್ಲಿ ಮಂಜೂರಾದ ಅನುದಾನ ಎಷ್ಟು; ಖರ್ಚು ಆದ ಅನುದಾನ ಎಷ್ಟು; ಪ್ರಗತಿ ಹಂತದಲ್ಲಿರುವ ಕಾಮಗಾರಿಗಳು ಯಾವುವು?